ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1250
ಸದಸ್ಯರ ಹೆಸರು : ಶ್ರೀ. ಎಸ್.ಎಲ್.ಧರ್ಮೇಗೌಡ(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 20.12.2018
ಉತ್ತರಿಸುವ ಸಚಿವರು : ಮಾನ್ಯ ಉನ್ನತ ಶಿಕ್ಷಣ ಸಚಿವರು

| ಪ್ರಶ್ನೆ | ಉತ್ತರ |
|---|---|
| ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲ್ಲೂಕಿಗೆ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಹಾಗಿದ್ದಲ್ಲಿ, ಯಾವಾಗ ಮಂಜೂರಾತಿ ನೀಡಲಾಗಿದೆ; (ಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಇಡಿ 75 ಹೆಚ್‌ಪಿಯು 2017 ದಿನಾಂಕ:09-08-2017 ರಲ್ಲಿ ಚಿಕ್ಕಮಗಳೂರು ಜಿಲ್ಲೆಯ ಸರ್ಕಾರಿ ಪಾಲಿಟೆಕ್ನಿಕ್, ತರೀಕೆರೆ ಸಂಸ್ಥೆಗೆ ಮಂಜೂರಾತಿ ನೀಡಿದೆ. |
| ಪಾಲಿಟೆಕ್ನಿಕ್ ಕಾಲೇಜಿನ ಕಟ್ಟಡ ನಿರ್ಮಾಣ ಮಾಡಲು ಸ್ಥಳ ಗುರುತಿಸಲಾಗಿದೆಯೇ; ಹಾಗಿದ್ದಲ್ಲಿ ಎಲ್ಲಿ ಗುರುತಿಸಲಾಗಿದೆ; ಕಟ್ಟಡ ನಿರ್ಮಾಣ ಮಾಡಲು ಇದುವರೆವಿಗೂ ಬಿಡುಗಡೆಯಾದ ಅನುದಾನ ಎಷ್ಟು; ಬಿಡುಗಡೆಯಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಸರ್ಕಾರ ಅನುದಾನವನ್ನು ಬಿಡುಗಡೆ ಮಾಡುವುದೇ; (ಮಾಹಿತಿ ನೀಡುವುದು). | ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ತರೀಕೆರೆ ತಾಲ್ಲೂಕ್, ಲಕ್ಕವಳ್ಳಿ ಹೋಬಳಿ, ಭಾವಿಕೆರೆ ಗ್ರಾಮದ ಸರ್ವೆ ನಂ.6/ ಪಿ2 ರಲ್ಲಿ 5-00 ಎಕರೆ ಜಮೀನನ್ನು ಸಾರ್ವಜನಿಕ ಉದ್ದೇಶದ ಸರ್ಕಾರಿ ಪಾಲಿಟೆಕ್ನಿಕ್, ತರೀಕೆರೆ ಸಂಸ್ಥೆಯ ಕಟ್ಟಡ ನಿರ್ಮಾಣಕ್ಕಾಗಿ ಮಂಜೂರು ಮಾಡಿರುತ್ತಾರೆ.<br><br>ಸದರಿ ಸಂಸ್ಥೆಯ ರೂ.800.00 ಲಕ್ಷಗಳ ಅಂದಾಜು ಮೊತ್ತದ ಕಟ್ಟಡ ನಿರ್ಮಾಣ ಕಾಮಗಾರಿಗೆ ಇದುವರೆವಿಗೂ ಒಟ್ಟು ರೂ.491.89 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಇದರಲ್ಲಿ 2018-19 ನೇಯ ಪ್ರಸಕ್ತ ಸಾಲಿಗೆ ರೂ. 81.89 ಲಕ್ಷ ಬಿಡುಗಡೆ ಮಾಡಲಾಗಿದೆ. |
| ಕಟ್ಟಡ ಕಾಮಗಾರಿ ಪ್ರಾರಂಭವಾಗಿದೆಯೇ; ಇದುವರೆಗಿನ ಕಟ್ಟಡದ ಭೌತಿಕ ಮತ್ತು ಆರ್ಥಿಕ ಸ್ಥಿತಿಗತಿಗಳೇನು; (ಪೂರ್ಣ ಮಾಹಿತಿ ನೀಡುವುದು). | ಸರ್ಕಾರದ ಆದೇಶ ಸಂಖ್ಯೆ: ಇಡಿ 75 ಹೆಚ್‌ಪಿಯು 2017, ದಿನಾಂಕ: 26/12/2017 ರಲ್ಲಿ ಸರ್ಕಾರಿ ಪಾಲಿಟೆಕ್ನಿಕ್,ತರೀಕೆರೆ ಸಂಸ್ಥೆಯ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ನಿರ್ವಹಿಸಲು ಸಂಸ್ಥೆಯನ್ನು ನಿಗದಿಗೊಳಿಸಿ ಆದೇಶಿಸಿದೆ.<br><br>ಸದರಿ ಸಂಸ್ಥೆಯ ಕಟ್ಟಡ ಕಾಮಗಾರಿಗೆ ಟೆಂಡರ್ ಅವಾರ್ಡ್ ಆಗಿದ್ದು, ಪ್ರಸ್ತುತ Men and material mobilization work ಪೂರ್ಣಗೊಂಡಿದ್ದು, ಶೀಘ್ರದಲ್ಲಿಯೇ ಕಾಮಗಾರಿಯನ್ನು ಪ್ರಾರಂಭಗೊಳಿಸಲಾಗುವುದು.<br><br>ಸದರಿ ಕಾಮಗಾರಿಗೆ ಬಾಕಿ ಅನುದಾನ ರೂ.308.11 ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಬೇಕಿದ್ದು, ಕಾಮಗಾರಿಯ ಪ್ರಗತಿಯ ಆಧಾರದನ್ವಯ ಹಂತ ಹಂತವಾಗಿ ಬಿಡುಗಡೆ ಮಾಡಲಾಗುವುದು. |
| ಕಟ್ಟಡ ನಿರ್ಮಾಣ ಕಾಮಗಾರಿಗೆ ಸರ್ಕಾರ ಕಾಲಮಿತಿಯೇನಾದರೂ ವಿಧಿಸಿದೆಯೇ; ಹಾಗಿದ್ದಲ್ಲಿ ಯಾವಾಗ ಪೂರ್ಣಗೊಳಿಸಲಾಗುವುದು? | ಸದರಿ ಸಂಸ್ಥೆಯ ಕಟ್ಟಡ ನಿರ್ಮಾಣ ಕಾಮಗಾರಿಯನ್ನು 18 ತಿಂಗಳ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು. |

(ಜಿ.ಟಿ.ದೇವೇಗೌಡ)
ಉನ್ನತ ಶಿಕ್ಷಣ ಸಚಿವರು

ಇಡಿ 194 ಹೆಚ್‌ಪಿಯು 2018